ಬೆಳಗಾವಿ ವಿಭಾಗದಲ್ಲಿರುವ ವಸತಿನಿಲಯಗಳ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-

30 (42) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಬೆಳಗಾವಿ ವಿಭಾಗದಲ್ಲಿ ಒಟ್ಟು ಎಷ್ಟು ವಸತಿನಿಲಯಗಳು ಕಾರ್ಯನಿರ್ವಹಿಸುತ್ತಿವೆ; (ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ) ಬಾಲಕ ಮತ್ತು ಬಾಲಕಿಯರ ವಸತಿನಿಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಎಷ್ಟು ವಸತಿನಿಲಯಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು;

(ಇ) ಬಾಡಿಗೆ ಕಟ್ಟಡಗಳಲ್ಲಿರುವ ವಸತಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸುವಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಈ) ಇನ್ನಾದರೂ ಸರ್ಕಾರ ಸ್ವಂತ ಕಟ್ಟಡ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ಮಾಹಿತಿ ಒದಗಿಸುವುದು) ;